ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕೋವಿಡ್-19- ಲಾಕ್‌ಡೌನ್

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ      ದಿನಾಂಕ : DATE : 22/4/2021

# ಕರ್ಫ್ಯೂ: ಕೆಲವು ಬಂದ್– ಹಲವು ನಿರ್ಬಂಧ

ಪ್ರಜಾವಾಣಿ ವಾರ್ತೆ 22-4-21

ಬೆಂಗಳೂರು: ರಾಜ್ಯ ಸರ್ಕಾರ 14 ದಿನಗಳ ಕಾಲ ರಾತ್ರಿ ಕರ್ಫ್ಯೂ ಮತ್ತು ವಾರಾಂತ್ಯದ ಬಂದ್ ಘೋಷಿಸಿದ್ದು, ಈ ಸಂದರ್ಭದಲ್ಲಿ ಹಲವು ಚಟುವಟಿಕೆಗಳನ್ನು ನಿರ್ಬಂಧಿಸಿ ಆದೇಶ ಹೊರಡಿಸಿದೆ.

ರಾತ್ರಿ ಕರ್ಫ್ಯೂ 9 ಗಂಟೆಯಿಂದ ಮಾರನೇ ದಿನ ಬೆಳಿಗ್ಗೆ 6 ಗಂಟೆಯವರೆಗೆ ಇರುತ್ತದೆ. ಈ ಸಂದರ್ಭದಲ್ಲಿ ಎಲ್ಲ ರೀತಿಯ ಚಟುವಟಿಕೆಗಳನ್ನು ನಿರ್ಬಂಧಿಸಲಾಗಿದೆ.

ಆಸ್ಪತ್ರೆಗೆ ಹೋಗುವವರು, ಅಗತ್ಯ ವಸ್ತುಗಳ ಸಾಗಣೆಗೆ ಅವಕಾಶವಿರುತ್ತದೆ. 14 ದಿನಗಳ ಕಾಲ ಬೆಳಿಗ್ಗೆ 6 ರಿಂದ ರಾತ್ರಿ 9 ರವರೆಗೆ ಹಲವು ಚಟುವಟಿಕೆಗಳ ಮೇಲೆ ನಿರ್ಬಂಧ ವಿಧಿಸಲಾಗಿದೆ. ಅವುಗಳ ವಿವರ ಈ ಕೆಳಗಿನಂತಿದೆ.



## ಏನೆಲ್ಲ ಇರುವುದಿಲ್ಲ

- ಶಾಲೆಗಳು, ಕಾಲೇಜುಗಳು, ಕೋಚಿಂಗ್ ಕೇಂದ್ರಗಳು. (ಆನ್‌ಲೈನ್, ದೂರಶಿಕ್ಷಣ ಮುಂದುವರೆಸಬಹುದು)
- ಸಿನಿಮಾ ಹಾಲ್‌ಗಳು, ಶಾಪಿಂಗ್ ಮಾಲ್, ಜಿಮ್ನಾಷಿಯಂ, ಯೋಗ ಕೇಂದ್ರಗಳು, ಸ್ಪಾ, ಕ್ರೀಡಾ ಕಾಂಪ್ಲೆಕ್ಸ್‌ಗಳು, ಸ್ಟೇಡಿಯಂ, ಈಜುಕೊಳ, ಮನರಂಜನಾ ಅಮ್ಯೂಸ್‌ಮೆಂಟ್ ಪಾರ್ಕ್, ಬಾರ್, ಕ್ಲಬ್, ಆಡಿಟೋರಿಯಂಗಳು ಮತ್ತಿತರ ಸಮಾವೇಶದ ತಾಣಗಳು
- ಎಲ್ಲ ರೀತಿಯ ಸಮಾವೇಶಗಳು, ಎಲ್ಲಾ ಧಾರ್ಮಿಕ ಸ್ಥಳಗಳು, ಪೂಜಾ, ಪ್ರಾರ್ಥನಾ ಮಂದಿರಗಳಿಗೆ ಭಕ್ತರಿಗೆ ಅವಕಾಶ ಇಲ್ಲ. ಆದರೆ, ಪೂಜಾ ಕೈಂಕರ್ಯ ನಡೆಸಲು ಅರ್ಚಕರಿಗೆ ಅವಕಾಶ ಇದೆ. ಆಯಾ ಧರ್ಮಗಳ ಧಾರ್ಮಿಕ ವಿಧಿ–ವಿಧಾನ ನಡೆಸಲು ಅವಕಾಶ ಇದೆ

## ಯಾವುದಕ್ಕೆಲ್ಲಾ ಅವಕಾಶ ಇದೆ

- ನೆರೆಹೊರೆಯ ಕಿರಾಣಿ ಅಂಗಡಿ, ನ್ಯಾಯ ಬೆಲೆ ಅಂಗಡಿ, ಆಹಾರ ಪದಾರ್ಥಗಳು, ಹಣ್ಣು, ತರಕಾರಿ, ಡೇರಿ, ಹಾಲು ಮತ್ತು ಇತರ ಉತ್ಪನ್ನಗಳು, ಮೀನು– ಮಾಂಸ, ಪ್ರಾಣಿಗಳ ಆಹಾರಗಳ (ಫೀಡ್ಸ್) ಮಾರಾಟಕ್ಕೆ ಅವಕಾಶ
- ಅಂತರ ರಾಜ್ಯಗಳಿಗೆ ಬಸ್ ಮತ್ತು ರೈಲುಗಳ ಸೇವೆಗೆ ಅವಕಾಶ ಇದೆ. ಸಾರಿಗೆ ಸಂಸ್ಥೆ ಬಸ್ಸುಗಳು, ಖಾಸಗಿ ಬಸ್ಸುಗಳು, ಟ್ಯಾಕ್ಸಿ, ಆಟೋರಿಕ್ಷಾಗಳ ಓಡಾಟಕ್ಕೆ ಅವಕಾಶ ಇದೆ. ಆಸನಗಳ ಒಟ್ಟು ಸಾಮರ್ಥ್ಯದ ಶೇ 50 ರಷ್ಟು ಮಾತ್ರ ಪ್ರಯಾಣಿಕರನ್ನು ಕರೆದೊಯ್ಯಬೇಕು
- ಲಾಡ್ಜ್ ಮತ್ತು ಹೋಟೆಲ್‌ಗಳಲ್ಲಿ ಉಳಿದುಕೊಂಡ ಅತಿಥಿಗಳಿಗೆ ಆಹಾರ ಪೂರೈಕೆ ಮಾಡಬಹುದು
- ಸಲೂನು, ಬ್ಯೂಟಿ ಪಾರ್ಲರ್‌ಗಳು ಕೋವಿಡ್ ನಿಯಮ ಪಾಲಿಸಿ ಕಾರ್ಯಾಚರಣೆ ನಡೆಸಬಹುದು
- 50 ಜನರ ಮಿತಿಯಲ್ಲಿ ಮದುವೆ ನಡೆಸಬಹುದು
- ಶವ ಸಂಸ್ಕಾರ, ಅಂತಿಮ ದರ್ಶನಕ್ಕೆ 20 ಜನರಿಗೆ ಮಾತ್ರ ಅವಕಾಶ

## ವಾರಾಂತ್ಯ ಪೂರ್ಣ ಬಂದ್

- ಶುಕ್ರವಾರ ರಾತ್ರಿ 9 ರಿಂದ ಸೋಮವಾರ ಬೆಳಿಗ್ಗೆ 6 ಗಂಟೆಯವರೆಗೆ ಬಂದ್ ಇರುತ್ತದೆ. ಈ ಸಂದರ್ಭದಲ್ಲಿ ತುರ್ತು ಮತ್ತು ಅಗತ್ಯ ಚಟುವಟಿಕೆಗಳನ್ನು ಬಿಟ್ಟು ಬೇರೆಯದಕ್ಕೆ ಅವಕಾಶ ಇಲ್ಲ. ರೋಗಿಗಳ ಸಾಗಣೆ, ಆರೋಗ್ಯ ಪರೀಕ್ಷೆ, ಲಸಿಕೆ ಹಾಕಿಸಿಕೊಳ್ಳಲು ಹೋಗುವವರಿಗೆ ಮಾತ್ರ ಅವಕಾಶ.
- ಅಂಗಡಿಗಳಲ್ಲಿ ಹಣ್ಣು ತರಕಾರಿ, ಹಾಲು ಮತ್ತಿತರ ಅಗತ್ಯ ವಸ್ತುಗಳನ್ನು ಬೆಳಿಗ್ಗೆ 6 ರಿಂದ 10 ಗಂಟೆಯ ಒಳಗೆ ಖರೀದಿಸಲು ಅನುಮತಿ.
- ಕೈಗಾರಿಕೆಗಳಲ್ಲಿ ಕಾರ್ಯ ನಿರ್ವಹಿಸಲು ಹೋಗುವವರಿಗೆ, ಟೆಲಿಕಾಂ ಸಿಬ್ಬಂದಿ ಮತ್ತು ಈ ಕಾರ್ಯಕ್ಕಾಗಿ ಒಯ್ಯುವ ವಾಹನಗಳು, ಇಂಟರ್‌ನೆಟ್ ಸೇವೆಗೆ ಹೋಗುವವರಿಗೆ ಮಾತ್ರ ಅವಕಾಶವಿದೆ.
- ರೆಸ್ಟೋರೆಂಟ್ ಮೂಲಕ ಪಾರ್ಸೆಲ್ ಒಯ್ಯಲು ಅವಕಾಶ
- ಮದುವೆಗೆ ಅವಕಾಶ ಇದ್ದು, 50 ಜನ ಸೇರಬಹುದು.